ಶ್ರೀ ಆರ್.ವಿ. ದೇಶಪಾಂಡೆ (ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು)

ಅ) ತುಮಕೂರು ಜಿಲ್ಲೆ ತುರುವೇಕೆರೆ ತಾಲ್ಲೂಕಿನಲ್ಲಿ ತುರುವೇಕೆರೆಯನ್ನು ಪ್ರವಾಸಿ ತಾಣವಾಗಿ ಗುರುತಿಸಲಾಗಿದೆ.

ಆ) ಬಂದಿದೆ.

ಇ) ಪ್ರವಾಸೋದ್ಯಮ ಇಲಾಖೆಯಿಂದ ಈ ಯೋಜನೆಗೆ ಸಂಬಂಧಿಸಿದಂತೆ ಅಂದಾಜು ಪಟ್ಟಿಯನ್ನು ತಯಾರಿಸಿರುವುದಿಲ್ಲ.

ಆದರೆ, ಈ ಕೆರೆಯ ವಿಸ್ತೀರ್ಣ ಸುಮಾರು 650 ಹೆಕ್ಟೇರ್ ಆಗಿದ್ದು, ಕೆರೆಯ ನೀರನ್ನು ಸುತ್ತಮುತ್ತಲಿನ ಗ್ರಾಮಗಳು ಕುಡಿಯುವ ನೀರಿಗಾಗಿ ಹಾಗೂ ವ್ಯವಸಾಯಕ್ಕಾಗಿ ಬಳಸುತ್ತಿರುವುದರಿಂದ ಹಾಗೂ ಈ ಕೆರೆಯು ಕಾವೇರಿ ನೀರಾವರಿ ನಿಗಮದ ವ್ಯಾಪ್ತಿಗೆ ಬರುವುದರಿಂದ ಪ್ರವಾಸಿ ತಾಣವನ್ನಾಗಿ ಅಭಿವೃದ್ಧಿಪಡಿಸಲು ಬರುವುದಿಲ್ಲ.

ಬಯಲು ರಂಗ ಮಂದಿರ ಮಂಜೂರು

1465(901); ಶ್ರೀ ಕೃಷ್ಣಪ್ಪ ಎಂ.ಟಿ. (ತುರುವೇಕೆರೆ)

ಅ) ತುರುವೇಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ದಂಡಿನಶಿವರ ಪ್ರಥಮ ದರ್ಜೆ ಕಾಲೇಜು ವಿದ್ಯಾರ್ಥಿಗಳ ಹಾಗೂ ಸಾರ್ವಜನಿಕರ ಅನುಕೂಲಕ್ಕಾಗಿ ಬಯಲುರಂಗಮಂದಿರ ನಿರ್ಮಾಣದ ಪ್ರಸ್ತಾವನೆ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಹೊಸ ಬಯಲುರಂಗ ಮಂದಿರ ನಿರ್ಮಿಸಲು ಸರ್ಕಾರ ಕೈಗೊಂಡ ಕ್ರಮವೇನು; (ವಿವರವಾದ ಮಾಹಿತಿ ನೀಡುವುದು)

ಶ್ರೀಮತಿ ಉಮಾಶ್ರೀ (ಮಾನ್ಯ ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಲಕಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು)

ಅ) ಹೌದು.

ಆ) ತುರುವೇಕೆರೆ ವಿಧಾನಸಭಾ ಕ್ಷೇತ್ರದ ದಂಡಿನಶಿವರ, ಗ್ರಾಮದಲ್ಲಿ ಬಯಲು ರಂಗಮಂದಿರ ನಿರ್ಮಾಣಕ್ಕೆ ಸರ್ಕಾರದ ಆದೇಶ ಸಂ.ಕಸಂವಾಪ್ರ 1095 ಕಸಧ 2012, ದಿನಾಂಕ: 26–11–2012ರಲ್ಲಿ ರೂ. 10.00 ಲಕ್ಷಗಳನ್ನು ಜಿಲ್ಲಾಧಿಕಾರಿಗಳು, ತುಮಕೂರು, ಇವರಿಗೆ ಬಿಡುಗಡೆ ಮಾಡಲಾಗಿದೆ. ಕಾಮಗಾರಿಯು ಒಳಾಂಗಣದಲ್ಲಿ ಪ್ಲಾಸ್ಟರಿಂಗ್ ಕಾಮಗಾರಿ ಬಾಕಿ ಇದ್ದು, ಒಟ್ಟಾರೆ ಕಾಮಗಾರಿ ಮುಕ್ತಾಯ ಹಂತದಲ್ಲಿದೆ.

ತುರುವೇಕೆರೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಆವರಣದಲ್ಲಿ 2012–13ನೇ ಸಾಲಿನಲ್ಲಿ ಬಯಲು ರಂಗಮಂದಿರ ನಿರ್ಮಾಣಕ್ಕೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ರೂ. 5.00 ಲಕ್ಷಗಳನ್ನು ಜಿಲ್ಲಾಧಿಕಾರಿಗಳು, ತುಮಕೂರು ಜಿಲ್ಲೆ ಇವರಿಗೆ ಬಿಡುಗಡೆ ಮಾಡಲಾಗಿದೆ. ಅದರಲ್ಲಿ ವೇದಿಕೆ ನಿರ್ಮಾಣ ಹಾಗೂ ಫ್ಲೋರಿಂಗ್ ನಿರ್ಮಾಣ ಮಾಡಿ ಬಯಲು ರಂಗಮಂದಿರ ಮೇಲ್ಭಾಗದಲ್ಲಿ ವಿನ್ಯಾಸ ಮಾಡಿರುತ್ತಾರೆ. ಕಾಮಗಾರಿಯನ್ನು ನಿರ್ಮಿತಿ ಕೇಂದ್ರ ಇವರಿಗೆ ವಹಿಸಿರುತ್ತಾರೆ.

ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿಗೆ ಮೂಲಭೂತ ಸೌಲಭ್ಯ ಒದಗಿಸುವುದು

1466(902); ಶ್ರೀ ಕೃಷ್ಣಪ್ಪ ಎಂ.ಟಿ. (ತುರುವೇಕೆರೆ)

ಅ) ತುರುವೇಕೆರೆ ಪಟ್ಟಣದಲ್ಲಿರುವ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ಮೂಲಭೂತ ಸೌಲಭ್ಯವಿರುವುದು (ಕಂಪ್ಯೂಟರ್ ಲ್ಯಾಬ್, ಶೌಚಾಲಯಗಳು, ಸೈಕಲ್ ಸ್ಟಾಂಡ್ ಹಾಗೂ ಇತರೆ ಸೌಲಭ್ಯಗಳು) ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಸದರಿ ಪಾಲಿಟೆಕ್ನಿಕ್ ಕಾಲೇಜಿಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಕೈಗೊಂಡಿರುವ ಕ್ರಮಗಳೇನು;

ಇ) ಯಾವಾಗ ಕ್ರಮ ಕೈಗೊಳ್ಳಲಾಗುವುದು?